**ANDOLANA**

Date: June 18, 2014 | Page: 2

Edition: Mysore | Language: Kannada

# ನಾಯಕತ್ವದ ಗುಣ ಬೆಳೆಸಿಕೊಳ್ಳಲು ಕರೆ

ಮೈಸೂರು,ಜೂ.೧೭–ಶಾಲಾ, ಕಾಲೇಜು ಅವಧಿಯಲ್ಲಿಯೇ ವಿದ್ಯಾರ್ಥಿಗಳು ಉತ್ತಮ ನಾಯಕತ್ವದ ಗುಣಗಳನ್ನು ಬೆಳೆಸಿಕೊಳ್ಳಬೇಕೆಂದು ಮೈಸೂರು ಮಿತ್ರ ಪತ್ರಿಕೆ ಸಂಸ್ಥಾಪಕ ಸಂಪಾದಕ ಕೆ.ಬಿ.ಗಣಪತಿ ಸಲಹೆ ನೀಡಿದರು.

ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ಶ್ರೀಧರ್ಮಸ್ಥಳ ಮಂಜುನಾಥ ಸ್ವಾಮಿ ನಿರ್ವಹಣಾ ಸಂಸ್ಥೆ ಮಂಗಳವಾರ ಸಂಸ್ಥೆಯ ಸಭಾಂಗಣದಲ್ಲಿ ನೂತನ ವರ್ಷದ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಒಂದು ವಾರ ಕಾಲದ ಶೈಕ್ಷಣಿಕ ಪುನಶ್ಚೇತನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

ವಿದ್ಯಾರ್ಥಿಗಳು ಅಧ್ಯಯನದ ಜೊತೆಗೆ ಕಾಲೇಜು ಅವಧಿಯಲ್ಲೇ ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳಬೇಕು. ನಾಯಕತ್ವದ ಗುಣಗಳಿದ್ದಾಗ ಯಶಸ್ವಿ ವ್ಯಕ್ತಿಯಾಗಲು ಸಾಧ್ಯವಾಗುತ್ತದೆ ಎಂದ ಅವರು, ಉತ್ತಮ ನಾಯಕತ್ವ ಗುಣ ಬೆಳೆಸಿಕೊಳ್ಳಲು ಕೆಲವು ಚರಿತ್ರೆಗಳ ಹಿನ್ನೆಲೆಯೊಂದಿಗೆ ಉದಾಹರಣೆ ಸಹಿತ ವಿವರಿಸಿದರು. ಜೊತೆಗೆ ವಿದ್ಯಾರ್ಥಿಗಳಿಗೆ ಕೆಲವು ಸಲಹೆ–ಸೂಚನೆಗಳನ್ನು ನೀಡುವ ಮುಖಾಂತರ ಮಾರ್ಗದರ್ಶನ ಮಾಡಿ ಶುಭ ಹಾರೈಸಿದರು.

ಶ್ರೀಧರ್ಮಸ್ಥಳ ಮಂಜುನಾಥ ಸ್ವಾಮಿ ನಿರ್ವಹಣಾ ಸಂಸ್ಥೆ ಉಪ ನಿರ್ದೇಶಕಿ ಡಾ.ಹೆಚ್.ಗಾಯಿತ್ರಿ, ನಿರ್ದೇಶಕ ಎನ್.ಆರ್.ಪರಶುರಾಮನ್ ಸೇರಿದಂತೆ ಸಂಸ್ಥೆಯ ಪ್ರಾಧ್ಯಾಪಕರು, ವಿದ್ಯಾರ್ಥಿಗಳು ಹಾಜರಿದ್ದರು.

ನಂತರ ಕರ್ನಾಟಕ ಭಾರತೀಯ ವಿದ್ಯಾಭವನದ ಅಧ್ಯಕ್ಷ ಎನ್. ರಾಮಾನುಜ, ಬೆಂಗಳೂರಿನ ಏಮ್ ಹೈ ಕನ್ಸಲ್ಟಿಂಗ್‌ನ ಸಿಇಓ ಎನ್. ರವಿಶಂಕರ್, ಶೈಕ್ಷಣಿಕ ಕಾರ್ಯಕ್ರಮದ ಅಧ್ಯಕ್ಷೆ ಪ್ರೊ.ಮಾಲತಿ ಶ್ರೀರಾವ್ ಅವರು ಉಪನ್ಯಾಸ ನೀಡಿದರು.



ಮೈಸೂರಿನ ಶ್ರೀಧರ್ಮಸ್ಥಳ ಮಂಜುನಾಥ ಸ್ವಾಮಿ ನಿರ್ವಹಣಾ ಸಂಸ್ಥೆಯಲ್ಲಿ ಮಂಗಳವಾರ ನೂತನ ವರ್ಷದ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಶೈಕ್ಷಣಿಕ ಪುನಶ್ಚೇತನ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಡಿಪ್ಲೋಮಾ ವಿದ್ಯಾರ್ಥಿಗಳು.